# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 334 |
| ಮಾನ್ಯ ಸದಸ್ಯರ ಹೆಸರು | ಶ್ರೀ ಕೆ. ಅಬ್ದುಲ್ ಜಬ್ಬಾರ್<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದವರು | ಅಬಕಾರಿ ಸಚಿವರು |
| ಉತ್ತರಿಸಬೇಕಾದ ದಿನಾಂಕ | 15.02.2024 |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಗ್ರಾಮೀಣ ಪ್ರದೇಶಗಳಲ್ಲಿ ಲೈಸೆನ್ಸ್ ಇಲ್ಲದೇ ಮದ್ಯ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಗ್ರಾಮೀಣ ಪ್ರದೇಶಗಳಲ್ಲಿ ಕೆಲವು ವ್ಯಕ್ತಿಗಳು ಅನಧಿಕೃತ ಸ್ಥಳಗಳಲ್ಲಿ ಲೈಸೆನ್ಸ್ ಇಲ್ಲದೇ ಮದ್ಯ ಮಾರಾಟ ಮಾಡುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆ. |
| ಆ) | ಹಾಗಿದ್ದಲ್ಲಿ, ಸರ್ಕಾರ ಗ್ರಾಮೀಣ ಪ್ರದೇಶಗಳಲ್ಲಿ ಮದ್ಯ ಮಾರಾಟ ಮಾಡುತ್ತಿರುವವರ ಮೇಲೆ ಯಾವ ಕಠಿಣ ಕ್ರಮ ಕೈಗೊಂಡಿದೆ; (ಸಂಪೂರ್ಣ ಮಾಹಿತಿ ನೀಡುವುದು) | ಲೈಸೆನ್ಸ್ ಇಲ್ಲದೇ ಮದ್ಯ ಮಾರಾಟ ತಡೆಯಲು ವಲಯ ವ್ಯಾಪ್ತಿಯ ರೂಟ್‌ಗಳಲ್ಲಿ ನಿರಂತರವಾಗಿ ಗಸ್ತು ನಡೆಸಲಾಗುತ್ತಿದೆ. ಸದರಿ ಗಸ್ತಿನ ಸಮಯದಲ್ಲಿ ದೂರು ಸ್ವೀಕೃತವಾದಲ್ಲಿ ಅಕ್ರಮವಾಗಿ ಮಾರಾಟವಾಗುತ್ತಿರುವ ಸ್ಥಳಗಳ ಮೇಲೆ ದಾಳಿ ನಡೆಸಿ ಅಕ್ರಮಗಳು ಕಂಡು ಬಂದಲ್ಲಿ ಅಬಕಾರಿ ಕಾಯ್ದೆ ಮತ್ತು ನಿಯಮಗಳನುಸಾರ ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ. ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಗಳಲ್ಲಿ ನಿಯಮಿತವಾಗಿ ರಸ್ತೆಗಾವಲು ನಡೆಸಿ ಸಂಶಯಾಸ್ಪದ ವಾಹನಗಳನ್ನು ತಪಾಸಣೆಗೆ ಒಳಪಡಿಸಲಾಗುತ್ತಿದೆ. ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸ್ಥಾಯಿ ಸಮಿತಿ ಸಭೆಯನ್ನು ಏರ್ಪಡಿಸಿ ಇತರೆ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ ಅಕ್ರಮ ಹತ್ತಿಕ್ಕಲು ಕ್ರಮ ವಹಿಸುವ ಕುರಿತು ಪೊಲೀಸ್ ವರಿಷ್ಠಾಧಿಕಾರಿಗಳು ಮತ್ತು ಜಿಲ್ಲಾ ಅರಣ್ಯ ಸಂರಕ್ಷಣಾಧಿಕಾರಿಗಳೊಂದಿಗೆ ಜಂಟಿ ಕಾರ್ಯಾಚರಣೆ ನಡೆಸಲಾಗುತ್ತಿದೆ. ಕರ್ನಾಟಕ ಅಬಕಾರಿ ಕಾಯ್ದೆ 1965 ರ ಕಲಂ 50 ರಂತೆ ಕಾರ್ಯವ್ಯಾಪ್ತಿಯಲ್ಲಿ ನಡೆಯುವ ಅಬಕಾರಿ ಅಕ್ರಮಗಳ ಕುರಿತು ಮಾಹಿತಿ ನೀಡಲು ತಿಳುವಳಿಕೆ ಪತ್ರ ಜಾರಿಗೊಳಿಸಲಾಗಿರುತ್ತದೆ. ಅಕ್ರಮ ಚಟುವಟಿಕೆಯಲ್ಲಿ ತೊಡಗಿರುವವರ ವಿರುದ್ಧ ಕರ್ನಾಟಕ ಅಬಕಾರಿ ಕಾಯ್ದೆ 1965 ರ |
| ಇ) | ಗ್ರಾಮೀಣ ಪ್ರದೇಶಗಳಲ್ಲಿ ಮದ್ಯ ಮಾರಾಟ ಮಾಡುತ್ತಿರುವುದರಿಂದ ಹಿಂದುಳಿದ ಜನರು, ಕೂಲಿ ಕಾರ್ಮಿಕರು, ರೈತರು ಹಾಗೂ ಬಡ ಜನರ ದುಡಿಮೆಯೆಲ್ಲಾ ಮದ್ಯ ಮಾರಾಟ ಮಾಡುವವರ ಪಾಲಾಗಿ, ಬಡವರು ಬೀದಿಗೆ | |

<table>
<tr><td></td><td>ಬಂದಂತಾಗಿರುವುದಕ್ಕೆ ಸರ್ಕಾರ ಯಾವ ಕ್ರಮ ವಹಿಸಿದೆ;</td><td>ಕಲಂ 32, 34 ಮತ್ತು 15(ಎ) ರನ್ವಯ ಪ್ರಕರಣ ದಾಖಲಿಸಿ ಸೂಕ್ತ ಕ್ರಮ ಕೈಗೊಳ್ಳಲಾಗಿದೆ.<br>ಅಬಕಾರಿ ಇಲಾಖೆಯ ಸಿಬ್ಬಂದಿಯು ಸದಾ ಕಾಲ ಜಾಗೃತರಾಗಿದ್ದು, ನಿರಂತರ ಗಸ್ತು ಕಾರ್ಯ ನಡೆಸಿ ಅಕ್ರಮವಾಗಿ ಮದ್ಯ ಮಾರಾಟವಾಗದಂತೆ ಎಚ್ಚರಿಕೆ ವಹಿಸುವಂತೆ ನಿರ್ದೇಶಿಸಲಾಗಿದೆ.<br><br>ಕಳೆದ ಮೂರು ವರ್ಷಗಳಲ್ಲಿ ರಾಜ್ಯಾದ್ಯಂತ ನಡೆಸಿದ ದಾಳಿ ಹಾಗೂ ದಾಖಲಿಸಿರುವ ಪ್ರಕರಣಗಳ ವಿವರ ಕೆಳಕಂಡಂತಿದೆ.<br>
<table>
<tr><td rowspan="2">ಅಬಕಾರಿ ಸಾಲು (ಜುಲೈ ರಿಂದ ಜೂನ್ ಮಾಹೆವರೆಗೆ)</td><td rowspan="2">ನಡೆಸಿದ ದಾಳಿ</td><td colspan="3">ದಾಖಲಿಸಿದ ಪ್ರಕರಣಗಳು</td></tr>
<tr><td>ಕ.ಅ.ಕಾಯ್ದೆ 1965 ರ ಕಲಂ 32,34</td><td>ಕ.ಅ.ಕಾಯ್ದೆ 1965ರ ಕಲಂ 15(ಎ)</td><td>ಒಟ್ಟು</td></tr>
<tr><td>2021-22</td><td>79,358</td><td>2,927</td><td>26,936</td><td>29,863</td></tr>
<tr><td>2022-23</td><td>1,18,770</td><td>6,679</td><td>59,219</td><td>65,898</td></tr>
<tr><td>2023-24 (ಡಿಸೆಂಬರ್ ಮಾಹೆಯ ಅಂತ್ಯದವರೆಗೆ)</td><td>39,831</td><td>1,531</td><td>13,990</td><td>15,521</td></tr>
<tr><td>ಒಟ್ಟು</td><td>2,37,959</td><td>11,137</td><td>1,00,145</td><td>1,11,282</td></tr>
</table></td></tr>
<tr><td>ಈ)</td><td>ಗ್ರಾಮೀಣ ಪ್ರದೇಶಗಳಲ್ಲಿ ಈ ಮದ್ಯ ಮಾರಾಟಕ್ಕೆ ಬಹುತೇಕ ಕಡೆಗಳಲ್ಲಿ ಅಲ್ಲಿಯ ಅಬಕಾರಿ ಅಧಿಕಾರಿಗಳು ಹಾಗೂ ಪೊಲೀಸರು ಭಾಗಿಯಾಗಿದ್ದು ಇದಕ್ಕೆ ಕಡಿವಾಣ ಹಾಕಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ?</td><td>ಅಬಕಾರಿ ಇಲಾಖೆಯ ಅಧಿಕಾರಿಗಳು ಗ್ರಾಮೀಣ ಪ್ರದೇಶಗಳಲ್ಲಿ ಲೈಸೆನ್ಸ್ ಇಲ್ಲದೇ ಮದ್ಯ ಮಾರಾಟವಾಗಲು ಶಾಮೀಲಾಗಿರುವುದು ಕಂಡು ಬಂದಿರುವುದಿಲ್ಲ.</td></tr>
</table>

ಆಇ 04 ಇಎಲ್‌ಕ್ಯೂ 2024

(ಆರ್.ಬಿ.ತಿಮ್ಮಾಪುರ)

ಅಬಕಾರಿ ಸಚಿವರು